# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ನೋಡಲ್ ಅಧಿಕಾರಿ ವಾರ್ಡ್ ಸಂಖ್ಯೆ 166 ಕರೀಸಂದ್ರ, ವಾರ್ಡ್ ಕಛೇರಿ, ಬೆಂಗಳೂರು,**

**ದಿನಾಂಕ: 18.06.2022 ರಂದು ಬೆಳಗ್ಗೆ 11:00 ಗಂಟೆಗೆ ವಾರ್ಡ್ ಸಂಖ್ಯೆ 166 ಕರೀಸಂದ್ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

*ಹಾಜರಿದ್ದ ಅಧಿಕಾರಿಗಳು:-*

1. ಶ್ರೀ. ಪ್ರದೀಪ್ ರಾಥೋಡ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ನವೀನ್ ಕುಮಾರ್. ಎಸ್ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ಕಿಯೋನಿಕ್ಸ್) (ವಾರ್ಡ್ 166 ಕರೀಸಂದ್ರ)
3. ಶ್ರೀ. ಪ್ರಕಾಶ್ – ಸಹಾಯಕ ಅಭಿಯಂತರರು (ವಾರ್ಡ್ 166 ಕರೀಸಂದ್ರ)
4. ಶ್ರೀ. ನರಸಿಂಹಲು – ಹಿ.ಆ.ಪ– (ವಾರ್ಡ್ 166 ಕರೀಸಂದ್ರ)
5. ಶ್ರೀ. ಕಲ್ಯಾಣ್ – ಕಿ.ಆ.ಪ (ಹೊರಗುತ್ತಿಗೆ ಆಧಾರದ ಮೇಲೆ) ವಾರ್ಡ್ 166 ಕರೀಸಂದ್ರ)
6. ಶ್ರೀ. ದಿನೇಶ್ – ಕಂದಾಯ ಪರಿವೀಕ್ಷಕರು – (ವಾರ್ಡ್ 166 ಕರೀಸಂದ್ರ)
7. ಘನತ್ಯಾಜ್ಯ ವಿಲೇವಾರಿ ಸೂಪರ್‌ವೈಸರ್‌ಗಳು – (ವಾರ್ಡ್ 166 ಕರೀಸಂದ್ರ)
8. ಶ್ರೀ. ರವಿಕುಮಾರ್ – ಕಿರಿಯ ಅಭಿಯಂತರರು (ಬೆಸ್ಕಾಂ)
9. ಬಿಡಬ್ಲ್ಯೂಎಸ್‌ಎಸ್‌ಬಿ ಸೂಪರ್‌ವೈಸರ್ಸ್.
10. 7ನೇ ಬ್ಲಾಕ್ ಜಯನಗರ ಸಂಘ ಸಂಸ್ಥೆಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು.

*********

ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಟ್ರಾಫಿಕ್ ಪೋಲೀಸ್ ಇಲಾಖೆ ಜಯನಗರ/ಬನಶಂಕರಿ ಪೊಲೀಸ್ ಅಧಿಕಾರಿಗಳು, ತೋಟಗಾರಿಕಾ ಅಧೀಕ್ಷಕರು, ಹಾಗೂ ಅರಣ್ಯ ಸಂರಕ್ಷಣಾಧಿಕಾರಿಗಳು, ದಕ್ಷಿಣ ವಲಯರವರು ಗೈರು ಹಾಜರಾಗಿದ್ದು, ಇನ್ನು ಮುಂದೆ ತಪ್ಪದೆ ಸಭೆಗೆ ಹಾಜರಾಗಲು ಸೂಚಿಸುತ್ತಾ, ಈ ಹಿಂದಿನ ಸಭೆಯಲ್ಲಿ ನಡೆದ ವಿಷಯಗಳ ಬಗ್ಗೆ ಚರ್ಚಿಸಲಾಗಿರುವಂತೆ ಅಧಿಕಾರಿಗಳು ಕೈಗೊಂಡಿರುವ ಕ್ರಮದ ಬಗ್ಗೆ ವಾರ್ಡ್ ಸಂಖ್ಯೆ–166ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರಿಗೆ ಪರಾಮರ್ಶೆಗಾಗಿ ವಿವರಿಸುವಂತೆ ಸೂಚಿಸಲಾಯಿತು.

ಈ ಹಿಂದಿನ ಸಭೆಯಲ್ಲಿ ಅಧಿಕಾರಿಗಳು ಕಾರ್ಯಗತಗೊಳ್ಳದ ಕೆಲಸಕಾರ್ಯಗಳನ್ನು ನಿಗಧಿತ ಅವಧಿಯೊಳಗೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿ ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಗಂಭೀರವಾಗಿ ಪರಿಗಣಿಸುವಂತೆ ಸೂಚಿಸಲಾಗಿ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

**1. ಕೋವಿಡ್–19 ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ.**

ಅಂಬೇಡ್ಕರ್‌ನಗರ, ಕಾವೇರಿನಗರ, ಪಾರ್ಕ್‌ಗಳ ಹತ್ತಿರ ಇರುವ ಕೊಳಚೆ ಪ್ರದೇಶಗಳಲ್ಲಿ ಹಾಗೂ 4ನೇ ಅಡ್ಡರಸ್ತೆ, 30ನೇ ಅಡ್ಡರಸ್ತೆ, ಜಯನಗರ 7ನೇ ಬ್ಲಾಕ್‌ನಲ್ಲಿ ನಿಲ್ಲುವ ಕಸದ ಲಾರಿ ಹತ್ತಿರ ನೀರು ನಿಲ್ಲುವಂತಹ ಸುತ್ತಮುತ್ತಲಿನ ಸೊಳ್ಳೆಗಳಿರುವ ಪ್ರದೇಶಗಳಿಗೆ ಔಷಧಿ ಸಿಂಪಡಣೆಗೆ ಸೂಚಿಸಲಾಯಿತು.

ಕ್ರಮ: ಆರೋಗ್ಯಾಧಿಕಾರಿಗಳು (ಪದ್ಮನಾಭನಗರ)

ಮು.ತಿ.ನೋ

2. <u>ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ.</u>

- ಜಯನಗರ 7ನೇ ಬ್ಲಾಕ್ ವೆಸ್ಟ್‌ನಲ್ಲಿ 2ನೇ ಅಡ್ಡರಸ್ತೆ, ಕುಡಿಯುವ ನೀರನ್ನು ಮಧ್ಯರಾತ್ರಿ ಸಮಯದಲ್ಲಿ ಬಿಡುತ್ತಿದ್ದು, ಸರಿಯಾದ ಪ್ರಮಾಣದಲ್ಲಿ ಬಿಡದೇ ತೊದರೆಯಾಗುತ್ತಿರುವುದಾಗಿ ಸಾರ್ವಜನಿಕರು ದೂರಿದರು. ಸದರಿ ಪ್ರಮಾಣದ ಸೂಕ್ತ ಪರಿಶೀಲನೆ ನಡೆಸಿ ನೀರು ಬಿಡಲು ಕ್ರಮ ಕೈಗೊಳ್ಳಲು ಸೂಚಿಸಲಾಯಿತು.
- ಜಯನಗರ 7ನೇ ಬ್ಲಾಕ್‌ನ ಸಾರ್ವಜನಿಕರು ಮಾತನಾಡಿ 6ನೇ, 7ನೇ ಮತ್ತು 8ನೇ ಅಡ್ಡರಸ್ತೆಯಲ್ಲಿ ಮಳೆ ಬಂದ ಸಮಯದಲ್ಲಿ ಮ್ಯಾನ್‌ಹೋಲ್‌ನಲ್ಲಿ ನೀರು ತುಂಬಿ ಮನೆಗೆ ನುಗ್ಗುತ್ತಿದೆ ಎಂದು ಸಾರ್ವಜನಿಕರು ದೂರಿದರು. ಹಾಗೆಯೇ, 6ನೇ ಅಡ್ಡರಸ್ತೆ ಮತ್ತು 11ನೇ ಅಡ್ಡರಸ್ತೆ, ಜಯನಗರ 7ನೇ ಬ್ಲಾಕ್‌ನಲ್ಲಿ ಯುಜಿಡಿ ಕಾಮಗಾರಿಯನ್ನು ಕೈಗೊಳ್ಳುವಂತೆ ಕೋರಿದರು. ಅದರಂತೆ ಅಧ್ಯಕ್ಷರು ಮಾತನಾಡಿ ಸದರಿ ಕಾಮಗಾರಿಯು ಬಹಳ ವರ್ಷಗಳಿಂದ ಬಾಕಿ ಇದ್ದು, ತುರ್ತಾಗಿ ಕಾಮಗಾರಿಯನ್ನು ಕೈಗೊಳ್ಳಲು ಸೂಚಿಸಿದರು.

ಕ್ರಮ: ಸ.ಅ & ಸ.ಕಾ.ನಿ.ಅ (ಬಿಡಬ್ಲ್ಯೂಎಸ್ಎಸ್‌ಬಿ)

3. <u>ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಟ್ರಾಫಿಕ್ ಪೋಲೀಸ್ ಇಲಾಖೆಗೆ ಸಂಬಂಧಿಸಿದ ವಿಷಯಗಳ ಬಗ್ಗೆ.</u>

- ವಾರ್ಡ್ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗಗಳ ಮೇಲೆ ಸಣ್ಣ ಪುಟ್ಟ ಅಂಗಡಿಗಳು ಇಟ್ಟಿರುವುದರಿಂದ ಸಾರ್ವಜನಿಕ ಪಾದಚಾರಿಗಳಿಗೆ ಓಡಾಡಲು ತೊಂದರೆಯುಂಟಾಗಿರುತ್ತದೆ. ಹಾಗೂ ಇದರಿಂದಾಗಿ ಸಾರ್ವಜನಿಕರು ವಾಹನ ನಿಲುಗಡೆಯಿಂದಾಗಿ ರಸ್ತೆಯಲ್ಲಿ ಓಡಾಡಲು ಹಾಗೂ ವಾಹನ ಸಂಚಾರ ಅಡ್ಡಿಪಡಿಸಿರುವುದಾಗಿ ಸಾರ್ವಜನಿಕರು ತಿಳಿಸಿದರು.
- ಕೃಷ್ಣ ಗ್ರಾಂಡ್ ಹೋಟೆಲ್ ಮುಂಭಾಗ ವಾಹನ ನಿಲುಗಡೆಯಿಂದ ಇತರೆ ವಾಹನಗಳ ಸುಗಮ ಸಂಚಾರಕ್ಕೆ ತೊಂದರೆಯುಂಟಾಗಿರುವುದರಿಂದ ತೆಗೆಸುವಂತೆ ಸಾರ್ವಜನಿಕರು ತಿಳಿಸಿದರು.
- 32ನೇ ಅಡ್ಡರಸ್ತೆ, 4ನೇ ಮುಖ್ಯರಸ್ತೆ ಮತ್ತು 3ನೇ ಮುಖ್ಯರಸ್ತೆ, ಜಯನಗರ 7ನೇ ಬ್ಲಾಕ್‌ನಲ್ಲಿ ಡ್ರೈವಿಂಗ್ ಸ್ಕೂಲ್ ನಿಂದ ವಾಹನ ತರಬೇತಿಯಿಂದಾಗಿ ಸಾರ್ವಜನಿಕರಿಗೆ ಬೆಳಿಗ್ಗೆ ವಾಕಿಂಗ್ ಮಾಡಲು ಟ್ರಾಫಿಕ್ ಸಮಸ್ಯೆ ವಿಪರೀತವಾಗಿರುತ್ತದೆ ಎಂದು ಸಾರ್ವಜನಿಕರು ತಿಳಿಸಿದರು.
- ಬನಶಂಕರಿ ಸ್ಮಶಾನಗಳಲ್ಲಿ ಕೆಲವು ಕಿಡಿಗೇಡಿಗಳು ಮದ್ಯಪಾನ ಹಾಗೂ ಗಾಂಜ ಸೇವನೆ ಮಾಡುತ್ತಿರುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಹಾಗೂ ಸದರಿ ಪ್ರದೇಶದಲ್ಲಿ ಸುತ್ತಮುತ್ತಲು ಸಿಸಿಟಿವಿ ಅಳವಡಿಸುವುದು ಅವಶ್ಯಕತೆ ಇರುವುದಾಗಿ ಸಾರ್ವಜನಿಕರು ತಿಳಿಸಿದರು.
- ಬೆಂಗಳೂರು ಇಂಟರ್‌ನ್ಯಾಷನಲ್ ಶಾಲೆ ಹತ್ತಿರ ಟ್ರಾಫಿಕ್ ಜಾಮ್ ಉಂಟಾಗುತ್ತಿರುತ್ತದೆ. ಅದನ್ನು ಕಡಿಮೆ ಮಾಡುವಂತೆ ಸಾರ್ವಜನಿಕರು ತಿಳಿಸಿದರು.
- ರಜಾತಾದ್ರಿ ಹೊಟೆಲ್ ಬಳಿ ಪಾದಚಾರಿಗಳಿಗೆ ಅನುಕೂಲವಾಗುವಂತೆ ಜೀಬ್ರಾ ಕ್ರಾಸಿಂಗ್ ಬೇಕೆಂದು ಸಾರ್ವಜನಿಕರು ತಿಳಿಸಿದರು.

ಕ್ರಮ: <u>ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಟ್ರಾಫಿಕ್ ಪೋಲೀಸ್</u> /
ಆರೋಗ್ಯಾಧಿಕಾರಿಗಳು (ಪದ್ಮನಾಭನಗರ) / ಸ.ಆ ವಾ-166/ಸ.ಕಾ.ನಿ.ಅ (ಬನಶಂಕರಿ),
ಕಾ.ಪಾ.ಅ/ಸ.ಕಾ.ನಿ.ಅ(ವಿದ್ಯುತ್-ದಕ್ಷಿಣ) ಬಿಬಿಎಂಪಿ

4. <u>ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.</u>

- ವಾರ್ಡ್ ವ್ಯಾಪ್ತಿಯಲ್ಲಿ ಸಿಲ್ಟ್ ಅಂಡ್ ಟ್ರಾಕ್ಟರ್‌ಗಳು ಕಾರ್ಯನಿರ್ವಹಿಸಿರುವ ಬಗ್ಗೆ ಮಾಹಿತಿಯನ್ನು ಕೇಳಲಾಯಿತು.
- ಜಯನಗರ 7ನೇ ಬ್ಲಾಕ್, 3ನೇ ಮುಖ್ಯರಸ್ತೆಲ್ಲಿರುವ ಪಾರ್ಕ್ ಹತ್ತಿರ ಕಸ ಜಾಸ್ತಿ ಇರುವುದರಿಂದ ಓಡಾಡಲು ತುಂಬಾ ಕಷ್ಟಕರವಾಗಿರುತ್ತದೆ ಎಂದು ಸಾರ್ವಜನಿಕರು ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿರುವ ಮೋನೋಟೈಪ್ ಹಾಗೂ ಸುತ್ತಾ ಮುತ್ತಾ ಕರೆಂಟ್ ಕಂಬಗಳ ಹತ್ತಿರವಿರುವ ಗುಂಡಿಗಳಲ್ಲಿ ಸಾರ್ವಜನಿಕರು ಕಸವನ್ನು ಹಾಕುತ್ತಿರುವುದರಿಂದ ಸುಗಮ ಓಡಾಟಕ್ಕೆ ಕಷ್ಟಕರವಾಗಿರುತ್ತದೆ ಎಂದು ತಿಳಿಸಿದರು.

ಕ್ರಮ: ಸ.ಕಾ.ನಿ.ಅ (ಘನತ್ಯಾಜ್ಯ) ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು

5. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.

- ವಾರ್ಡ್ ವ್ಯಾಪ್ತಿಯ ಜಯನಗರ 7ನೇ ಬ್ಲಾಕ್‌ನ 4ನೇ ಅಡ್ಡರಸ್ತೆಯಲ್ಲಿ ಶೋಲ್ಡರ್ ಡ್ರೈನ್ ಮಾಡುವಂತೆ ಸಾರ್ವಜನಿಕರು ಕೋರಿರುತ್ತಾರೆ.
- ಬನಶಂಕರಿ 2ನೇ ಹಂತದ 5ನೇ ಮುಖ್ಯರಸ್ತೆ, 17ನೇ ಅಡ್ಡರಸ್ತೆಯಲ್ಲಿ ಕಲ್ವರ್ಟ್ ಮಾಡಿಕೊಡಲು ಕೋರಿರುತ್ತಾರೆ.

ಕ್ರಮ: ಸ.ಕಾ.ನಿ.ಅ & ಸ.ಅ (ವಾರ್ಡ್ 166)

6. ಇನ್ನಿತರೆ ವಿಷಯಗಳು ಅಧ್ಯಕ್ಷರ ಸೂಚನೆಯಂತೆ.

- 6ನೇ ಅಡ್ಡರಸ್ತೆ, 7ನೇ ಅಡ್ಡರಸ್ತೆ, 8ನೇ ಅಡ್ಡರಸ್ತೆ ಮತ್ತು 11ನೇ ಅಡ್ಡರಸ್ತೆಗಳಲ್ಲಿ ಮರದ ರೆಂಬೆ ಕೊಂಬೆಗಳನ್ನು ತೆರವುಗೊಳಿಸಲು ಸೂಚಿಸಲಾಯಿತು.

ಕ್ರಮ: ಅರಣ್ಯ ಅಧಿಕಾರಿ (ದಕ್ಷಿಣ–ಬಿಬಿಎಂಪಿ)

- 4ನೇ, 5ನೇ ಮತ್ತು 6ನೇ ಅಡ್ಡರಸ್ತೆಗಳು ಹಾಗೂ 1ನೇ ಬಿ ಮುಖ್ಯರಸ್ತೆ, ಜಯನಗರ 7ನೇ ಬ್ಲಾಕ್‌ನಲ್ಲಿ ಬೀದಿ ನಾಯಿಗಳ ಹಾವಳಿ ಜಾಸ್ತಿಯಾಗಿರುತ್ತದೆ ಎಂದು ತಿಳಿಸಿದರು.

- ಕ್ರಮ: ಪಶುಪಾಲನೆ ಅಧಿಕಾರಿ (ದಕ್ಷಿಣ–ಬಿಬಿಎಂಪಿ)

ವಾರ್ಡ್‌ನ_ಸಾರ್ವಜನಿಕರ ಹಿತದೃಷ್ಟಿಯಿಂದ ವಾರ್ಡ್ ವ್ಯಾಪ್ತಿಯಲ್ಲಿ ಸಮಸ್ಯೆಗಳಾದಲ್ಲಿ ವಾರ್ಡ್ ಕಛೇರಿಯಲ್ಲಿ ರಿಜಿಸ್ಟರ್ ಪುಸ್ತಕದಲ್ಲಿ ದಾಖಲಿಸಿ ನಿರ್ವಹಣೆ ಮಾಡಲು ಕಾರ್ಯದರ್ಶಿರವರಿಗೆ ಸೂಚಿಸಲಾಯಿತು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಪ್ರದೀಪ್ ರಾಥೋಡ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು
ವಾರ್ಡ್ ಸಂಖ್ಯೆ 166

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 166

